ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

(23)

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 23/12/20

# ಸಿಎಂ ಬಿಎಸ್‌ವೈ ವಿರುದ್ಧದ ಭೂಹಗರಣ ಇನ್ನೂ ಜೀವಂತ

**ಸಂ.ಕ.ಸಮಾಚಾರ ಬೆಂಗಳೂರು** 23/12/20

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಿಂದೆ ಉಪ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಕೈಗಾರಿಕಾ ಕಾರಿಡಾರ್‌ಗಾಗಿ ವಶಪಡಿಸಿಕೊಂಡಿದ್ದ ಜಮೀನನ್ನು ಡಿನೋಟಿಫಿಕೇಶನ್ ಮಾಡಿದ ಪ್ರಕರಣದ ವಿರುದ್ಧದ ಲೋಕಾಯುಕ್ತ ತನಿಖೆಯನ್ನು ಕೈಬಿಡಲು ಹೈಕೋರ್ಟ್ ನಿರಾಕರಿಸಿದೆ. ಹೀಗಾಗಿ ಬೆಳ್ಳಂದೂರು ಹಾಗೂ ದೇವರಬೀಸನಹಳ್ಳಿಯಲ್ಲಿ ಸರ್ಕಾರಿ ಜಮೀನು ಡಿನೋಟಿಫಿಕೇಶನ್ ಮಾಡಿದ ಪ್ರಕರಣದ ತನಿಖೆಗೆ ಮರುಜೀವ ಬಂದಂತಾಗಿದೆ.

ಪ್ರಕರಣ ಸಂಬಂಧ ತಮ್ಮ ವಿರುದ್ಧದ ಎಫ್‌ಐಆರ್ ಮತ್ತು ಲೋಕಾಯುಕ್ತ ಕೋರ್ಟ್‌ನಲ್ಲಿ ನಡೆಯುತ್ತಿರುವ ವಿಚಾರಣೆಯನ್ನು ರದ್ದುಪಡಿಸುವಂತೆ ಕೋರಿ 2019ರಲ್ಲಿ ಯಡಿಯೂರಪ್ಪ ಸಲ್ಲಿಸಿದ್ದ ತಕರಾರು ಅರ್ಜಿಯನ್ನು ತಿರಸ್ಕರಿಸಿ ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹಾ ಅವರಿದ್ದ ಏಕ ಸದಸ್ಯ ನ್ಯಾಯಪೀಠ ಮಂಗಳವಾರ ಆದೇಶಿಸಿದೆ.

ಬೆಂಗಳೂರಿನ ಬೆಳ್ಳಂದೂರು ಹಾಗೂ ದೇವರಬೀಸನಹಳ್ಳಿಯಲ್ಲಿ ಐಟಿ ಕಾರಿಡಾರ್‌ಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವಶಪಡಿಸಿಕೊಂಡಿದ್ದ ಜಮೀನನ್ನು ಅಕ್ರಮವಾಗಿ ಡಿನೋಟಿಫಿಕೇಷನ್ ಮಾಡಿದ ಆರೋಪ ಸಂಬಂಧ ಯಡಿಯೂರಪ್ಪ ವಿರುದ್ಧ ಲೋಕಾಯುಕ್ತ ಪೊಲೀಸರು 2015ರಲ್ಲಿ ಎಫ್‌ಐಆರ್ ದಾಖಲಿಸಿದ್ದರು. ಈ ಸಂಬಂಧ ಲೋಕಾಯುಕ್ತ ಕೋರ್ಟ್ ವಿಚಾರಣೆ ಆರಂಭಿಸಿತ್ತು.

ಲೋಕಾಯುಕ್ತ ಕೋರ್ಟ್ 2015ರ ಫೆ.8ರಂದು ತನಿಖೆಗೆ ಆದೇಶಿಸಿದ್ದರೂ 2019ರವರೆಗೂ ಸಮರ್ಪಕ ತನಿಖೆ ನಡೆಸದ ಲೋಕಾಯುಕ್ತ ಪೊಲೀಸರ ಕಾರ್ಯವೈಖರಿಗೆ ಹೈಕೋರ್ಟ್ ಇದೇ ವೇಳೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆಯಲ್ಲದೇ ತನಿಖೆಯ ಮೇಲ್ವಿಚಾರಣೆ ನಡೆಸುವಂತೆ ಲೋಕಾಯುಕ್ತ ಕೋರ್ಟ್‌ಗೆ ನಿರ್ದೇಶಿಸಿದೆ.

ಯಡಿಯೂರಪ್ಪ ವಿರುದ್ಧ ತನಿಖೆ ನಡೆಸುವಂತೆ 2015ರ ಫೆ.18ರಂದು ಲೋಕಾಯುಕ್ತ ಕೋರ್ಟ್ ಆದೇಶಿಸಿತ್ತು. 2019ರ ಜ.25ರಂದು ಯಡಿಯೂರಪ್ಪ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಏ.2ರಂದು ತನಿಖೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಈ ನಡುವಿನ ನಾಲ್ಕು ವರ್ಷದಲ್ಲಿ ಪ್ರಕರಣದ ತನಿಖೆ ನಡೆಸುವುದಕ್ಕೆ ಯಾವುದೇ ನ್ಯಾಯಾಲಯದಿಂದ ತಡೆಯಾಜ್ಞೆ ಇರಲಿಲ್ಲ. ಆದರೂ ಲೋಕಾಯುಕ್ತ ಪೊಲೀಸರು ಯಡಿಯೂರಪ್ಪ ವಿರುದ್ಧ ತನಿಖೆ ನಡೆಸಿಲ್ಲ. ಉನ್ನತ ಹುದ್ದೆಯಲ್ಲಿರುವವರ ವಿರುದ್ಧದ ಪ್ರಕರಣಗಳು ತನಿಖೆ ಪ್ರಗತಿ ಕಾಣದಿದ್ದರೆ ಕಾನೂನು ಮತ್ತು ನ್ಯಾಯಾಂಗ ವ್ಯವಸ್ಥೆ ಮೇಲಿನ ನಂಬಿಕೆಯನ್ನು ಸಾರ್ವಜನಿಕರು ಕಳೆದುಕೊಳ್ಳುವ ಪರಿಸ್ಥಿತಿ ಉದ್ಭವಿಸುತ್ತದೆ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ವಿಚಾರಣೆ ವೇಳೆ ದೂರುದಾರ ವಾಸುದೇವ ರೆಡ್ಡಿ ಪರ ವಕೀಲ ಕೆ.ವಿ.ಧನಂಜಯ ವಾದ ಮಂಡಿಸಿ, ಐಟಿ ಕಾರಿಡಾರ್ ಡಿನೋಟಿಫಿಕೇಷನ್ ಕುರಿತ ಆರ್.ವಿ. ದೇಶಪಾಂಡೆ ವಿರುದ್ಧದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ. ಅದನ್ನು ಪರಿಗಣಿಸಿ ಯಡಿಯೂರಪ್ಪ ಅವರ ವಿರುದ್ಧದ ಎಫ್‌ಐಆರ್‌ಗೆ 2019ರ ಏ.2ರಂದು ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ವಾಸ್ತವವಾಗಿ ಯಡಿಯೂರಪ್ಪ ಪ್ರಕರಣಕ್ಕೂ ದೇಶಪಾಂಡೆ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ. ಇಬ್ಬರೂ ಬೇರೆ ಬೇರೆ ಅವಧಿಯಲ್ಲಿ ಡಿನೋಟಿಫಿಕೇಷನ್ ಆದೇಶ ಹೊರಡಿಸಿದ್ದಾರೆ. ಅವರ ಮಧ್ಯೆ ಒಳಸಂಚಿಗೂ ಅವಕಾಶವಿಲ್ಲ. ದೂರು ದಾಖಲಿಸಲು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆಯುವುದು ಬೇಕಿಲ್ಲ. ಹೀಗಾಗಿ, ಯಡಿಯೂರಪ್ಪ ಅರ್ಜಿ ವಜಾಗೊಳಿಸಬೇಕೆಂದು ಕೋರಿದ್ದರು.